# ಕರ್ನಾಟಕ ವಿಧಾನ ಪರಿಷತ್ತು

## ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ತಿಪ್ಪಣ್ಣಪ್ಪ ಕಮಕನೂರ ರವರ ನಿಯಮ 330 ರ ಅಡಿಯಲ್ಲಿ ಗಮನ ಸೆಳೆಯುವ ಸೂಚನೆಗೆ ಉತ್ತರ.

**ಸೂಚನೆ:** ಕೇಂದ್ರ ಸರ್ಕಾರ ತಳವಾರ/ಪರಿವಾರ ಸಮುದಾಯದವರನ್ನು ಪರಿಶಿಷ್ಟ ಪಂಗಡಕ್ಕೆ ಸೇರಿಸಿ ಮಾರ್ಚ್ 2020ರಲ್ಲಿ ಅಧಿಸೂಚನೆ ಹೊರಡಿಸಿದ್ದರೂ ರಾಜ್ಯದಲ್ಲಿ ಮುಂದುವರೆದ ಗೊಂದಲಗಳಿಂದಾಗಿ ಪರಿಶಿಷ್ಟ ಪಂಗಡ ಜಾತಿ ಪ್ರಮಾಣ ಪತ್ರ ನೀಡದಿರುವುದು ಕಂಡುಬಂದಿದ್ದು, ಸರ್ಕಾರ ಗೊಂದಲ ನಿವಾರಣೆ ಮಾಡಿ, ಪರಿಶಿಷ್ಟ ಪಂಗಡ ಜಾತಿ ಪ್ರಮಾಣ ಪತ್ರ ನೀಡಲು ಎಲ್ಲಾ ಜಿಲ್ಲಾಧಿಕಾರಿಗಳಿಗೆ ಆದೇಶ ನೀಡಬೇಕೆನ್ನುವ ಕುರಿತು ನಿಯಮ 330ರಡಿ ಮಾನ್ಯ ಮುಖ್ಯಮಂತ್ರಿಗಳಲ್ಲಿ ಪ್ರಸ್ತಾಪಿಸಬಯಸುತ್ತೇನೆ.

*****

**ಹೇಳಿಕೆ:** ಕೇಂದ್ರ ಸರ್ಕಾರದ ಅಧಿಸೂಚನೆ ಸಂಖ್ಯೆ:04 of 2020 ದಿನಾಂಕ:19.03.2020 ರಲ್ಲಿ An Act further to amend the Constitution (Scheduled Tribes) Order, 1950, to modify the list of the Scheduled Tribes in the state of Karnataka ರಲ್ಲಿ ಈ ಕೆಳಕಂಡಂತೆ ತಳವಾರ , ಪರಿವಾರ ಸಮುದಾಯದವರನ್ನು ಪರಿಶಿಷ್ಟ ಪಂಗಡಕ್ಕೆ ಸೇರಿಸಿರುತ್ತಾರೆ.

**(b) "In entry 38. For the Words "Naikda, Nayaka,"the words and brackets "Naikda, Nayaka (including Parivara and Talawara)" shall be substituted"** ಪ್ರಕಟಿಸಿದೆ.

ಮೇಲ್ಕಂಡ ಭಾರತ ಸರ್ಕಾರದ ಗೆಜೆಟ್ ಅಧಿಸೂಚನೆ ದಿನಾಂಕ:19.03.2020 ರನ್ವಯ ರಾಜ್ಯ ಸರ್ಕಾರದ ಸುತ್ತೋಲೆ ಸಂಖ್ಯೆ:ಸಕಇ 23 ಎಸ್ ಎಡಿ 2009 ದಿನಾಂಕ:06.06.2020, ಸುತ್ತೋಲೆ ಸಂಖ್ಯೆ:ಸಕಇ 23 ಎಸ್ ಎಡಿ 2009 ದಿನಾಂಕ:31.08.2020, Circular No. SWD 180 SAD 2020 (p) Dated:29.01.2022 ಮತ್ತು ಸುತ್ತೋಲೆ ಸಂಖ್ಯೆ:STW/SECB/STP/315/2024 ದಿನಾಂಕ:07.02.2025ರ ಸರ್ಕಾರದ ಸುತ್ತೋಲೆಗಳಲ್ಲಿ ಪರಿಶಿಷ್ಟ ಪಂಗಡದ Naikda, Nayaka ಸಮುದಾಯದ ಪರ್ಯಾಯ ಪದ (Synonym) ಜಾತಿಗಳಾದ Parivara ಮತ್ತು Talawara ಜಾತಿಗಳಿಗೆ ಕರ್ನಾಟಕ ಅನುಸೂಚಿತ ಜಾತಿಗಳೂ, ಅನುಸೂಚಿತ ಬುಡಕಟ್ಟುಗಳು ಮತ್ತು ಇತರೆ ಹಿಂದುಳಿದ ವರ್ಗಗಳ (ನೇಮಕಾತಿ ಮುಂತಾದವುಗಳ ಮೀಸಲಾತಿ) ಅಧಿನಿಯಮ 1990 ಮತ್ತು ನಿಯಮಗಳು 1992 ರನ್ವಯ ಪರಿಶಿಷ್ಟ ಪಂಗಡದ ಜಾತಿ ಪ್ರಮಾಣ ಪತ್ರ ನೀಡುವ ಪ್ರಾಧಿಕಾರವಾಗಿರುವ ಆಯಾ ತಾಲ್ಲೂಕಿನ ತಹಶೀಲ್ದಾರರು ಜಾತಿ ಪ್ರಮಾಣ ಪತ್ರ ನೀಡುವಾಗ ಪಾಲಿಸಬೇಕಾಗಿರುವ ಕಾರ್ಯವಿಧಾನವನ್ನು ಕಡ್ಡಾಯವಾಗಿ ಪಾಲಿಸಿ ಪರಿಶಿಷ್ಟ ಪಂಗಡದ ಜಾತಿಗೆ ಸೇರಿದ ತಳವಾರ ಮತ್ತು ಪರಿವಾರ ಜಾತಿಗಳಿಗೆ ಮಾತ್ರ ಯಾವುದೇ ತೊಂದರೆಯಾಗದಂತೆ ಹಾಗೂ ನಿಗಧಿತ ಅವಧಿಯೊಳಗೆ ಪರಿಶಿಷ್ಟ ಪಂಗಡದ ಜಾತಿ ಪ್ರಮಾಣ ಪತ್ರವನ್ನು ನೀಡುವಂತೆ ಸಂಬಂಧಿಸಿದ ಪ್ರಾಧಿಕಾರಿಗಳಿಗೆ ಸೂಚಿಸಲಾಗಿದೆ.

ಸದರಿ ಸುತ್ತೋಲೆಗಳನ್ನು ಎಲ್ಲಾ ಇಲಾಖೆಯ ಮುಖ್ಯಸ್ಥರು, ಎಲ್ಲಾ ಜಿಲ್ಲೆಯ ಜಿಲ್ಲಾಧಿಕಾರಿಗಳು/ಉಪವಿಭಾಗಾಧಿಕಾರಿಗಳು/ತಹಶೀಲ್ದಾರ್ ರವರಿಗೆ ಮೇಲ್ಕಂಡ ಸರ್ಕಾರದ ಸುತ್ತೋಲೆಗಳಲ್ಲಿನ ಅಂಶಗಳಂತೆ ನಿಯಮಾನುಸಾರ ಪರಿಶೀಲಿಸಿ ಪರಿಶಿಷ್ಟ ಪಂಗಡದ ಜಾತಿ ಪ್ರಮಾಣ ಪತ್ರವನ್ನು ನೀಡಲು ಸೂಚಿಸಲಾಗಿದೆ.

**STW/SECB/SAD/91/2025**

ಸಿದ್ದರಾಮಯ್ಯ
**(ಸಿದ್ದರಾಮಯ್ಯ)**
**ಮುಖ್ಯಮಂತ್ರಿ**